# ವಿಶ್ವ ಹಿಂದೂ ಪರಿಷತ್ ಸಂಸ್ಥಾಪನಾ ದಿನಾಚರಣೆ–ಶ್ರೀಕೃಷ್ಣ ಜನ್ಮಾಷ್ಟಮಿ




ಗದಗ, ಆ.12: ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್ ಕಾರ್ಯಾಲಯದಲ್ಲಿ ಮಂಗಳವಾರ ವಿಶ್ವ ಹಿಂದೂ ಪರಿಷತ್ ಸಂಸ್ಥಾಪನಾ ದಿನಾಚರಣೆ ಹಾಗೂ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸಲಾಯಿತು.

ವಿಶ್ವ ಹಿಂದೂ ಪರಿಷತ್ ಸ್ಥಾಪನೆ ಹಾಗೂ ಅದರ ಧ್ಯೇಯೋದ್ದೇಶಗಳ ಕುರಿತು ಜಿಲ್ಲಾ ಪ್ರಮುಖರು ಮಾತನಾಡಿದರು.

ಶ್ರೀ ಕೃಷ್ಣ ಜನ್ಮಾಷ್ಟಮಿದಿನದಂದು ಮುಂಬೈನ ಸಾಂದೀಪನಿ ಆಶ್ರಮದಲ್ಲಿ 29–8–1964ರಲ್ಲಿ ಸ್ಥಾಪನೆಯಾದ ವಿಶ್ವ ಹಿಂದು ಪರಿಷದ್. ಮುಂಬೈ ಸಾಂದೀಪನಿ ಆಶ್ರಮದಲ್ಲಿ ಎರಡು ದಿನಗಳ ಸಭೆಯಲ್ಲಿ ವಿಶ್ವದ ವಿವಿಧ ಭಾಗಗಳಿಲ್ಲಿರುವ ಹಿಂದುಗಳನ್ನು ಒಗ್ಗೂಡಿಸಲು ನೋಂದಾಯಿತ ಸಂಸ್ಥೆಯಾದ ವಿಶ್ವ ಹಿಂದು ಪರಿಷತ್‌ನ್ನು ಸರ್ವಾನುಮತದಿಂದ ಅಂಗೀಕರಿಸಲಾಯಿತು.

ಸ್ವಾಮಿ ಚಿನ್ಮಯಾನಂದರು, ಸಂತ ತುಕುಡೋಜಿ ಮಹಾರಾಜ, ರಾಷ್ಟ್ರೀಯ ಸ್ವಯಂಸೇವಕ ಸಂಘದ ದ್ವಿತೀಯ ಸರ ಸಂಘಚಾಲಕರಾದ ಪ.ಪೂ. ಗುರೂಜಿ, ಕೆ.ಎಂ.ಮುನ್ಷಿ, ಸಿಖ್ ನಾಯಕ ಮಾಸ್ಟರ್ ತಾರಸಿಂಗ್, ಹಿಂದು ಮಹಾ ಸಭೆಯ ನಾಯಕ ವಿ.ಜಿ.ದೇಶಪಾಂಡೆ, ಕರ್ನಾಟಕದ ಪ್ರತಿನಿಧಿಯಾಗಿ ಡಾ.ಎಂ.ಎಂ ನರಸಿಂಹಾಚಾರ್, ಶಿವರಾಂ ಆಪ್ಟೆ ಹಾಗೂ ಜಗತ್ತಿನ ವಿವಿಧೆಡೆಗಳಿಂದ ಸಾಧು ಸಂತರು ಅನೇಕ ಜನ ಗಣ್ಯರು ಧಾರ್ಮಿಕ ಹಾಗೂ ಸಾಮಾಜಿಕ ಮುಖಂಡರು ಉಪಸ್ಥಿತರಿದ್ದರು.

ವಿಶ್ವ ಹಿಂದೂ ಪರಿಷತ್‌ನ ಪ್ರಮುಖ ಧ್ಯೇಯೋದ್ದೇಶಗಳಲ್ಲಿ ಹಿಂದು ಸಮಾಜವನ್ನು ಸಂಘಟಿಸಿ ಶಕ್ತಿಶಾಲಿಗೊಳಿಸುವ ಸಲುವಾಗಿ ಮುಂದಾಳುತನ ವಹಿಸುವುದು. ಆಧುನಿಕ ಸನ್ನಿವೇಶಗಳಿಗೆ ಸಮ್ಮತವಾಗುವಂತಹ ರೀತಿಯಲ್ಲಿ ಹಿಂದು ಧಾರ್ಮಿಕ ತತ್ವಜ್ಞಾನವನ್ನು ಮತ್ತು ಆಚರಣೆಗಳನ್ನು ಹಾಗೂ ನೈತಿಕ ಆಧ್ಯಾತ್ಮಿಕ ಸಿದ್ಧಾಂತಗಳನ್ನು ವಿಶ್ವಾದ್ಯಂತ ಪಸರಿಸುವುದು.

ವಿದೇಶಗಳಲ್ಲಿ ನೆಲೆಸಿರುವ ಹಿಂದೂಗಳಿಗೆ ಸಂಪರ್ಕ ಬೆಳೆಸಿ, ಸಂಬಂಧಗಳನ್ನು ಧೃಡಗೊಳಿಸುವುದು ಹಾಗೂ ಅವರಿಗೆ ಅಗತ್ಯವೆನಿಸುವ ಸರ್ವವಿಧ ನೆರವು ನೀಡುವದಾಗಿದೆ.

ಹಿಂದುಗಳಲ್ಲಿನ ವಿವಿಧತೆಯಲ್ಲಿ ಏಕತೆಯನ್ನು ತರುವ, ಹಲವು ಜಾತಿಯ ಬೇಲಿಯನ್ನು ಕಿತ್ತು ಹಾಕಿ ನಾವೆಲ್ಲ ಹಿಂದು ನಾವೆಲ್ಲ ಒಂದು ನಾವೆಲ್ಲ ಬಂಧು ಎಂಬ ಸಾಮಾಜಿಕ ಸಾಮರಸ್ಯವನ್ನು ರೂಪಿಸುವದಾಗಿದೆ ಎಂದು ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್‌ನ ಪದಾಧಿಕಾರಿಗಳು ಮಾತನಾಡಿದರು.

ಕಾರ್ಯಕ್ರಮದಲ್ಲಿ ಕೋಶಾಧ್ಯಕ್ಷ ಮಾರುತಿ ಪವಾರ, ರಾಘು ಕಬ್ಬೇರ, ಅನಿಲ ಚವ್ವಾಣ, ಉಮೇಶ್ ಪವಾರ್, ಸುಂದರ ವಾಲ್ಮೀಕಿ, ಮಾರುತಿ ದಹಿಂಡೆ, ಜಿಲ್ಲಾ ಸಹಕಾರ್ಯದರ್ಶಿ ರಾಘವೇಂದ್ರ ಹಬೀಬ ಯಶೋಧ ನಾಯ್ಕರ್, ಸಂಜು ಸೇರಿದಂತೆ ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗ ದಳದ ಕಾರ್ಯಕರ್ತರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಕ್ಕಳಿಗೆ ಹಾಗೂ ಕಾರ್ಯಕರ್ತರಿಗೆ ಸಿಹಿ ವಿತರಿಸಿ ಸಂಭ್ರಮಿಸಲಾಯಿತು.

# ಡಿ.ಜಿ ಹಳ್ಳಿ ಪ್ರಕರಣದಲ್ಲಿ ಪತ್ರಕರ್ತರ ಮೇಲೆ ನಡೆದ ಹಲ್ಲೆ ಖಂಡಿಸಿ ಪತ್ರಕರ್ತರಿಂದ ಮನವಿ



ಗದಗ: ಬೆಂಗಳೂರಿನ ದೇವರ ಜೀವನಹಳ್ಳಿ (ಡಿ.ಜಿ ಹಳ್ಳಿ) ಪ್ರಕರಣದಲ್ಲಿ ವರದಿಗೆಂದು ತೆರಳಿದ್ದ ಪತ್ರಕರ್ತರ ಮೇಲೆ ನಡೆಸಿದ ಹಲ್ಲೆಯನ್ನು ಖಂಡಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಗದಗ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಮಂಗಳವಾರ ರಾತ್ರಿ ಗಲಭೆ ನಡೆದ ಸಂದರ್ಭದಲ್ಲಿ ವರದಿ ಮಾಡಲು ಸ್ಥಳಕ್ಕೆ ತೆರಳಿದ್ದ ವರದಿಗಾರರ ಮೇಲೆ ಹಲ್ಲೆ ನಡೆಸಿರುವುದು ಅತ್ಯಂತ ಖಂಡನೀಯ. ಇದರೊಟ್ಟಿಗೆ ಕ್ಯಾಮೆರಾ ಹಾಗೂ ವಾಹನವನ್ನು ಜಖಂ ಮಾಡಲಾಗಿದ್ದು, ಈ ಹಿನ್ನೆಲೆಯಲ್ಲಿ ಘಟನೆಗೆ ಸಂಬಂಧಪಟ್ಟಂತೆ ಹಲ್ಲೆಕೋರರ ಮೇಲೆ ಕೂಡಲೇ ಕಾನೂನು ಕ್ರಮ ಕೈಗೊಂಡು, ತಪ್ಪಿತಸ್ಥರನ್ನು ಬಂಧಿಸಿ ಶಿಕ್ಷೆಗೆ ಗುರಿಪಡಿಸಬೇಕು ಎಂದು ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಎಚ್.ಎಂ. ಶರೀಫನವರ, ಉಪಾಧ್ಯಕ್ಷ ಬನೇಶ್ ಕುಲಕರ್ಣಿ, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಕುಷ್ಟಗಿ, ಖಜಾಂಚಿ ರಾಮಣ್ಣ ವಗ್ಗಿ, ಪತ್ರಕರ್ತರಾದ ಅಮೃತ ಅಜ್ಜಿ, ಶರಣು ದೊಡ್ಡೂರ, ಎನ್.ಎಲ್. ಕಟ್ಟಿಮನಿ, ಸಲೀಂ ಬಳಬಟ್ಟಿ, ಮಹಾಲಿಂಗೇಶ ಹಿರೇಮಠ, ಸಂತೋಷ ಕೊಣ್ಣೂರ, ಮಂಜುನಾಥ ರಾಥೋಡ, ಕೆ.ಎಂ. ಸತೀಶ ಬೆಳ್ಳಕ್ಕಿ, ಮಂಜುನಾಥ ಶಿರಸಂಗಿ, ಮಂಜುನಾಥ ಪತ್ತಾರ, ಅಪ್ಪಾಸಾಹೇಬ ಚಿನಗುಂಡಿ, ವೆಂಕಟೇಶ ಇಮರಾಪೂರ, ಎಸ್.ಪಿ. ಕಡ್ಲಿಮಟ್ಟಿ, ವಿರೇಂದ್ರ ನಾಗಲದಿನ್ನಿ, ಖಾಜಾಸಾಬ ಬೂದಿಹಾಳ, ರುದ್ರಗೌಡ ಪಾಟೀಲ ಸೇರಿದಂತೆ ಇತರರು ಇದ್ದರು.

# ಲಾಕ್‌ಡೌನ್ ಪರಿಹಾರಧನ:ವಿದ್ಯುತ್ ಮಗ್ಗ ನೇಕಾರರಿಂದ ಅರ್ಜಿ ಆಹ್ವಾನ

ಬೆಳಗಾವಿ, ಆ. 12–: ಪ್ರಸ್ತುತ ಕೋವಿಡ್–19 ಸಾಂಕ್ರಾಮಿಕ ರೋಗದಿಂದಾಗಿ ಲಾಕ್‌ಡೌನ್ ಪರಿಸ್ಥಿತಿಯಲ್ಲಿ ವಿದ್ಯುತ್ ಮಗ್ಗ ನೇಕಾರರು ಸಹ ಸಂಕಷ್ಟದಲ್ಲಿರುವುದರಿಂದ ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ವಿದ್ಯುತ್ ಸರಬರಾಜು ಪಡೆಯುತ್ತಿರುವ ಘಟಕಗಳ ವಿದ್ಯುತ್ ಮಗ್ಗಗಳಲ್ಲಿ ಕೆಲಸ ಮಾಡುತ್ತಿರುವ ಪ್ರತಿ ಕೂಲಿ ಕಾರ್ಮಿಕರಿಗೆ ಒಂದು ಬಾರಿಗೆ ಮಾತ್ರ ಅನ್ವಯಿಸುವಂತೆ ರೂ.2,000/– ಗಳ ಪರಿಹಾರಧನವನ್ನು ನೇರವಾಗಿ ಸದರಿ ಕಾರ್ಮಿಕರ ಆಧಾರ್ ಲಿಂಕ್ಸ್ ಬ್ಯಾಂಕ್ ಖಾತೆಗೆ ಸರ್ಕಾರದಿಂದ ಬಿಡುಗಡೆ ಮಾಡಲಾಗುವುದು.

ಈ ಯೋಜನೆಯಡಿ ಅರ್ಜಿ ಸಲ್ಲಿಸಲು ಬಾಕಿ ಇರುವ ನೇಕಾರರು/ಮಾಲೀಕರು ದಿನಾಂಕ:20–08–2020 ರ ಒಳಗಾಗಿ ಆಯಾ ಊರುಗಳಲ್ಲಿ ಈಗಾಗಲೇ ನಿಗದಿಪಡಿಸಿದ ಸ್ಥಳಗಳಲ್ಲಿ ಸಲ್ಲಿಸಬಹುದು ಅಥವಾ ಈ ಕಚೇರಿಗೆ ನೇರವಾಗಿ ಸಂಪರ್ಕಿಸಿ ಸಲ್ಲಿಸಬಹುದು.ಅರ್ಜಿ ಸಲ್ಲಿಸಲು ದಿನಾಂಕ: 20–08–2020 ಕೊನೆಯ ದಿನವಾಗಿದ್ದು, ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.ಈಗಾಗಲೇ ಅರ್ಜಿ ಸಲ್ಲಿಸಿರುವ ನೇಕಾರರು ಹಾಗೂ ಇನ್ನು ಮುಂದೆ ಅರ್ಜಿ ಸಲ್ಲಿಸುವ ನೇಕಾರರು ತಮ್ಮ ಆಧಾರ ಸಂಖ್ಯೆ ತಮ್ಮ ಬ್ಯಾಂಕಿನ ಖಾತೆಗಳಿಗೆ ಲಿಂಕ್ ಆಗಿರುವುದನ್ನು ಹಾಗೂ ಖಾತೆ ಚಾಲ್ತಿಯಲ್ಲಿರುವುದನ್ನು ಕೂಡಲೇಖಾತ್ರಿಪಡಿಸಿಕೊಳ್ಳುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 0831–2950674ಗೆಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂಢನಂಬಿಕೆ ಹೆಸರಿನಲ್ಲಿ ಅಂಗವಿಕಲರ ಮೇಲೆ ನಡೆಯುವ ಅಮಾನವೀಯ ಪದ್ಧತಿ ತಡೆಯಲು ಕ್ರಮ

ಗದಗ .ಆ.12 : ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಕಾಯ್ದೆಯನ್ವಯ ಅಂಗವಿಕಲ ವ್ಯಕ್ತಿಗಳು ಚಿತ್ರಹಿಂಸೆಗೆ, ಕ್ರೌರ್ಯಕ್ಕೆ ಅಮಾನುಷ ಅಥವಾ ಅಗೌರವದ ವರ್ತನೆಗಳಿಗೆ ಈಡಾಗದಂತೆ ಅವರನ್ನು ರಕ್ಷಿಸಲು ಕ್ರಮ ಕೈಗೊಳ್ಳುವಂತೆ ಸರ್ಕಾರ ನಿರ್ದೇಶಿಸಿದೆ. ಈ ಹಿನ್ನೆಲೆಯಲ್ಲಿ ಅಂಗವಿಕಲ ವ್ಯಕ್ತಿಗಳಿಗೆ ಸಮಾಜದಲ್ಲಿ ಸಮಾನ ಅವಕಾಶ ನೀಡಿ ಅವರ ಗೌರವ ಕಾಪಾಡುವ ನಿಟ್ಟಿನಲ್ಲಿ ಮುಂಬರುವ ವರ್ಷಗಳಲ್ಲಿ ಗ್ರಹಣಗಳು ಮತ್ತು ಇನ್ನಾವುದೇ ಪ್ರಸಂಗಗಳಲ್ಲಿ ಅಂಗವಿಕಲರನ್ನು ಅವಮಾನಿಸುವಂತಹ ಘಟನೆಗಳು ನಡೆಯದಂತೆ ಮುಂಜಾಗ್ರತೆ ವಹಿಸಲು ಜಿಲ್ಲೆಯ ಎಲ್ಲ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಸ್ಥಳೀಯ ಸಂಘ ಸಂಸ್ಥೆಗಳು ಕ್ರಮ ಕೈಗೊಳ್ಳಬೇಕೆಂದು ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಜುಲೈ ಮಾಹೆ ಪಡಿತರ ಚೀಟಿ ವಿತರಣೆ

ಬೆಳಗಾವಿ, ಆ. 12 –: ಆಗಸ್ಟ–2020ರ ಮಾಹೆಗೆ ರಾಜ್ಯ ಸರ್ಕಾರವು ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ಮತ್ತು ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ ಪಡಿತರವನ್ನು ನೀಡುತ್ತಿದ್ದು, ಜುಲೈ–2020 ರ ಮಾಹೆಯ ಪಡಿತರ ವಿತರಿಸಲು ಜಿಲ್ಲಾಧಿಕಾರಿಗಳಾದ ಎಂ.ಜಿ.ಹಿರೇಮಠ ಅವರು ಸೂಚನೆ ನಿಡಿದ್ದಾರೆ.

ಅಂತ್ಯೋದಯ ಪಡಿತರ ಚೀಟಿ ಹೊಂದಿದ ಪ್ರತಿ ಕುಟುಂಬಕ್ಕೆ ಉಚಿತವಾಗಿ 35 ಕೆ.ಜಿ ಅಕ್ಕಿ (NFSA), ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ (PMGKAY) ನೀಡಲಾಗುತ್ತಿದೆ.

ಬಿಪಿಎಲ್ ಪಡಿತರ ಚೀಟಿ ಹೊಂದಿದವ ಪ್ರತಿ ಕುಟುಂಬಕ್ಕೆ ಉಚಿತವಾಗಿ ಪ್ರತಿ ಸದಸ್ಯರಿಗೆ 10 ಕೆ.ಜಿ ಅಕ್ಕಿ (NFSA + PMGKAY) ಪ್ರತಿ ಕುಟುಂಬಕ್ಕೆ 2ಕೆ.ಜಿ ಗೋಧಿ ವಿತರಿಸಲಾಗುತ್ತಿದೆ.

ಎಪಿಎಲ್ ಪಡಿತರ ಚೀಟಿ ಹೊಂದಿದವ ಪ್ರತಿ ಕುಟುಂಬಕ್ಕೆ (ಆದ್ಯತೇತರ) ರೂ 15 ರಂತೆ ಪ್ರತಿ ಕೆ.ಜಿಗೆ ಒಪ್ಪಿಗೆ ನೀಡಿದ ಹಾಗೂ ಒಪ್ಪಿಗೆ ನೀಡಲಾರದ ಪಡಿತರ ಚೀಟಿದಾರ ಏಕ ಸದಸ್ಯರಿಗೆ 5 ಕೆ.ಜಿ ಅಕ್ಕಿ ಹಾಗೂ ಎರಡಕಿಂತ್ತಲೂ ಮತ್ತು ಹೆಚ್ಚಿನ ಸದಸ್ಯರಿಗೆ 10 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು.

ವಲಸೆ ಕಾರ್ಮಿಕರಿಗೆ ಹಾಗೂ ಪಡಿತರ ಚೀಟಿ ಪಡೆಯದೆ ಇರುವ ಪ್ರತಿ ಫಲಾನುಭವಿಗೆ ಜುಲೈ ಹಾಗೂ ಅಗಸ್ಟ ಮಾಹೆಗಳಿಗೆ (ಈಗಾಗಲೇ ಮೇ ಮತ್ತು ಜೂನ್ ಮಾಹೆಯಲ್ಲಿ ವಿತರಿಸಿದ ಫಲಾನುಭವಿಗಳನ್ನು ಹೊರತುಪಡಿಸಿ) ಪಡಿತರ ಚೀಟಿ ಹೊಂದದೆ ಇರುವ ಹಾಗೂ ವಲಸೆ ಕಾರ್ಮಿಕರಿಗೆ ತಲಾ 5 ಕೆ.ಜಿ ಅಕ್ಕಿ ಹಾಗೂ 1 ಕೆ.ಜಿ. ಕಡಲೆಕಾಳು ನೀಡಲಾಗುವುದು.

ಅಂತರ್‌ರಾಜ್ಯ/ಅಂತರ್‌ಜಿಲ್ಲೆ ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ಪಡಿತರ ವರ್ಗದ ಪಡಿತರ ಚೀಟಿಗೆ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಕಡ್ಡಾಯವಾಗಿ ಬಯೋಮೆಟ್ರಿಕ್ ಮೂಲಕವೇ ಪಡಿತರ ವಿತರಣೆ ಮಾಡಲಾಗುವುದು. ಜಿಲ್ಲೆಯಾದ್ಯಂತ ಇರುವ ನ್ಯಾಯಬೆಲೆ ಅಂಗಡಿಕಾರರು ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಕಾರ್ಯವನ್ನು ಸಾಮಾಜಿಕ ಅಂತರ ಹಾಗೂ ಕೋವಿಡ್–19 ನಿಮಿತ್ಯ ವಹಿಸಬೇಕಾಗಿರುವ ಎಲ್ಲ ಮಾನದಂಡಣೆಗಳನ್ವಯ ವಿತರಣೆಗೆ ಕ್ರಮವಹಿಸಬೇಕು.

ಪ್ರತಿ ಮಂಗಳವಾರ ರಜೆಯ ದಿನ ಮತ್ತು ರಾಷ್ಟ್ರೀಯ ರಜೆಯ ದಿನಗಳನ್ನು ಹೊರತುಪಡಿಸಿ ಪಡಿತರ ವಿತರಣೆಯನ್ನು ತಿಂಗಳ ಪೂರ್ತಿ ವಿತರಿಸುವಂತೆ ನ್ಯಾಯಬೆಲೆ ಅಂಗಡಿಕಾರರಿಗೆ ಸೂಚಿಸಲಾಗಿದೆ.

ಪಡಿತರ ಚೀಟಿದಾರರಿಗೆ ಯಾವುದೇ ರೀತಿಯಾಗಿ ನ್ಯಾಯಬೆಲೆ ಅಂಗಡಿಕಾರರಿಂದ ತೊಂದರೆಯಾದಲ್ಲಿ ಟೋಲ್‌ಫ್ರಿ ಸಂಖ್ಯೆ 1967 ಗೆ ಕರೆ ಮಾಡಿ ದೂರನ್ನು ದಾಖಲಿಸಬೇಕು.

ಜಿಲ್ಲೆಯ ಅಂಗಡಿಕಾರರು ಸರ್ಕಾರ ನೀಡುತ್ತಿರುವ ಪಡಿತರ ವಸ್ತುಗಳನ್ನು ಹೊರತುಪಡಿಸಿ ಬೇರೆ ವಸ್ತುಗಳನ್ನು ವಿತರಣೆ ಮಾಡತಕ್ಕದ್ದಲ್ಲ ಹಾಗೂ ಯಾವುದೇ ಕಾರಣಕ್ಕೂ ಪ್ರತಿ ಪಡಿತರ ಚೀಟಿದಾರರಿಂದ ಸಬೂಬು ಹೇಳಿ ಇಂಟರನೇಟ್ ವಗೈರೆ ಚಾರ್ಜಸ್‌ನ್ನು ವಸೂಲಿ ಮಾಡತಕ್ಕದ್ದಲ್ಲ ಒಂದು ವೇಳೆ ಈ ರೀತಿ ದೂರುಗಳನ್ನು ಬಂದಲ್ಲಿ ಆಯಾ ತಾಲೂಕಿನ ಕಾರ್ಯನಿರ್ವಾಹಕ ಸಿಬ್ಬಂದಿಗಳನ್ನೆ ನೇರ ಹೊಣೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ವಿಧ್ಯಾರ್ಥಿಗಳಿಗೆ ಸನ್ಮಾನ



ಗದಗ .ಆಗಸ್ಟ 12 : ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಜಿಲ್ಲೆಗೆ ತೃತೀಯ ಸ್ಥಾನ ಪಡೆದ ಕು.ದಾನೇಶ್ವರಿ.ಬಿ.ಮಲ್ಲಾಡದ ಇವರಿಗೆ ಭೂದಾಖಲೆಗಳ ಉಪನಿರ್ದೇಶಕ ರವಿಕುಮಾರ ಅವರು ಸನ್ಮಾನಿಸಿ ಅಭಿನಂದಿಸಿದರು. ಕಳೆದ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ಕಚೇರಿ ಸಿಬ್ಬಂದಿಗಳ ಮಕ್ಕಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಕಚೇರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕೆ.ಜಿ.ಹಳ್ಳಿ ದೊಂಬಿ ಪ್ರಕರಣದ ಆರೋಪಿಗಳ ಗಡಿಪಾರಿಗೆ ಆಗ್ರಹ



ಗದಗ : ಬೆಂಗಳೂರಿನ ಕೆ.ಜಿ. ಹಳ್ಳಿಯಲ್ಲಿ ಪತ್ರಕರ್ತರ ಮೇಲೆ ಹಲ್ಲೆ ಮಾಡಿದ ಮುಸ್ಲೀಂ ಗೂಂಡಾಗಳನ್ನು ಬಂಧಿಸಿ ದೇಶದಿಂದ ಗಡಿಪಾರು ಮಾಡುವಂತೆ ಆಗ್ರಹಿಸಿ ಶ್ರೀರಾಮ ಸೇನೆಯ ಕಾರ್ಯಕರ್ತರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀರಾಮ ಸೇನೆಯ ಧಾರವಾಡ ವಿಭಾಗೀಯ ಸಂಚಾಲಕ ರಾಜೂ ಖಾನಪ್ಪನವರ ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ರಂಗ ನಾಲ್ಕನೇಯ ಅಂಗವೆಂದು ಹೆಸರಾಗಿದೆ. ಸಮಾಜದಲ್ಲಿ ನಡೆಯುವ ಪ್ರತಿಯೊಂದು ಘಟನೆಗಳನ್ನು ಯಥಾವತ್ತಾಗಿ ಸಮಾಜದ ಮುಂದೆ ತೆರೆದಿಡುವ ಪತ್ರಕರ್ತರ ಮೇಲೆ ರಾಜ್ಯದಲ್ಲಿ ಹಲ್ಲೆಗಳು ಹೆಚ್ಚುತ್ತಿವೆ. ಇದು ಅತ್ಯಂತ ಖಂಡನೀಯವಾಗಿದೆ. ಬೆಂಗಳೂರಿನ ಕೆಜಿಹಳ್ಳಿಯಲ್ಲಿ ಮುಸ್ಲೀಂ ಗೂಂಡಾಗಳು ಪೊಲೀಸ್ ಠಾಣೆ,ಶಾಸಕರ ಮನೆಗೆ ಬೆಂಕಿ ಹಚ್ಚಿ ದೊಂಬಿಯನ್ನು ಸೃಷ್ಟಿಸಿದ್ದಾರೆ. ಈ ಗಲಭೆಯಿಂದ ಸಮಸ್ತ ಬೆಂಗಳೂರಿನ ಜನತೆ ಹಾಗೂರಾಜ್ಯದ ಜನತೆ ತೀವ್ರವಾಗಿ ಗಾಬರಿಗೊಂಡಿದ್ದಾರೆ. ಈ ಘಟನೆಯನ್ನು ನಮ್ಮ ಸಂಘಟನೆ ಅತ್ಯುಗ್ರವಾಗಿ ಖಂಡಿಸುತ್ತದೆಯೆಂದು ಹೇಳಿದರು.

ಬೆಂಗಳೂರಿನಲ್ಲಿ ದುಷ್ಟ ಮುಸ್ಲೀಂ ಗೂಂಡಾಗಳು ನಡೆಸಿದ ದೊಂಬಿಯ ವರದಿಗಾಗಿ ತೆರಳಿದ್ದ ಪತ್ರಕರ್ತ ಮೇಲೆ ತೀವ್ರ ಹಲ್ಲೆಯಾಗಿದ್ದು ತೀವ್ರ ಗಾಯಗೊಂಡಿದ್ದಾರೆ. ಪತ್ರಕರ್ತರಿಗೆ ರಾಜ್ಯದಲ್ಲಿ ನೆಮ್ಮದಿಯಿಂದ ಕಾರ್ಯನಿರ್ವಹಿಸುವಂತಹ ಪರಿಸ್ಥಿತಿಯಿಲ್ಲದಿರುವದು ಅತ್ಯಂತ ವಿಷಾದನೀಯವಾಗಿದೆ.

ಈ ದಿಸೆಯಲ್ಲಿ ಕೆಜಿ ಹಳ್ಳಿಯಲ್ಲಿ ದೊಂಬಿ ಉಂಟಾಗಲು ಕಾರಣವಾಗಿರುವ ಮುಸ್ಲೀಂ ಗೂಂಡಾಗಳನ್ನು ಬಂಧಿಸಬೇಕು. ಸಾರ್ವಜನಿಕರ ಆಸ್ತಿ ಪಾಸ್ತಿಗಳಿಗೆ ಆಗಿರುವ ನಷ್ಟವನ್ನು ಈ ಗೂಂಡಾಗಳ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡು ಸರಿತೂಗಿಸಬೇಕು. ಈ ಗೂಂಡಾಗಳನ್ನು ದೇಶದಿಂದ ಗಡಿಪಾರು ಮಾಡುವಂತೆ ಆಗ್ರಹಿಸಿದರು.

ಈ ಘಟನೆಯ ಹಿಂದೆ ಭಯೋತ್ಪಾದಕರ ಕೈವಾಡದ ಶಂಕೆಯಿದೆ. ಈ ಭಯೋತ್ಪಾದಕರು ಬೆಂಗಳೂರನ್ನು ಕೇಂದ್ರವನ್ನಾಗಿಸಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆಂದು ತಿಳಿದು ಬಂದಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಈ ಘಟನೆಯನ್ನು ಸಮಗ್ರವಾಗಿ ತನಿಖೆಗೊಳಪಡಿಸಬೇಕು. ಈ ಘಟನೆಯ ಹಿಂದೆ ಯಾವದೇ ಪ್ರಭಾವಿ ವ್ಯಕ್ತಿಗಳಿದ್ದರೂ ಸಹ ಅವರ ಮೇಲೆ ಸೂಕ್ತ ಕ್ರಮ ಜರುಗಿಸುವಂತೆ ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಅಪರ ಜಿಲ್ಲಾಧಿಕಾರಿ ಎಂ.ಸತೀಶಕುಮಾರ ಮನವಿಯನ್ನು ಸೂಕ್ತ ಕ್ರಮಕ್ಕಾಗಿ ಸರಕಾರಕ್ಕೆ ರವಾನಿಸುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಹಾಂತೇಶ ಪಾಟೀಲ,ಜಿಲ್ಲಾ ಸಂಚಾಲಕ ಮಹೇಶ ರೋಖಡೆ,ಹನುಮಂತಸಾ ಕಲಬುರ್ಗಿ,ವಿರೇಶ ಮಾನ್ವಿ,ಸುನೀಲ ಮುಳ್ಳಾಳ,ರಮೇಶ ಆದಿ, ಪ್ರತೀಪ್ ಭೋಸಲೆ, ಅನೀಲ ಮುಳ್ಳಾಳ, ಪವನ ಚವ್ಹಾಣ ಮುಂತಾದವರಿದ್ದರು.

# ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

ಗದಗ.ಆ.12 : ಕೃಷಿ ವಿಶ್ವವಿದ್ಯಾಲಯ ಧಾರವಾಡ ವತಿಯಿಂದ ಕೃಷಿಯಲ್ಲಿ ವಿಶೇಷ ಸಾಧನೆ ಮಾಡಿದ ಜಿಲ್ಲೆಯ ರೈತರನ್ನು ಗುರುತಿಸಿ, ಪ್ರತಿ ಜಿಲ್ಲೆಗೊಬ್ಬರಂತೆ ಶ್ರೇಷ್ಠ ಕೃಷಿಕ ಮತ್ತು ಕೃಷಿ ಮಹಿಳೆ ಹಾಗೂ ಪ್ರತಿ ತಾಲ್ಲೂಕಿಗೊಬ್ಬರಂತೆ 35 ವರ್ಷದೊಳಗಿನವರಿಗೆ ಶ್ರೇಷ್ಠ ಯುವ ಕೃಷಿಕ, ಕೃಷಿ ಮಹಿಳೆಯರ ಆಯ್ಕೆಗೆ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ಆ.31 ಕೊನೆಯ ದಿನವಾಗಿದೆ. ಆಯ್ಕೆಯಾದ ರೈತರಿಗೆ 2020ರ ಕೃಷಿ ಮೇಳದಲ್ಲಿ ಪ್ರಶಸ್ತಿ ನೀಡಲಾಗುವುದು. ಆಸಕ್ತರು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಅಥವಾ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರುಗಳ ಕಛೇರಿಗಳಿಂದ ಅರ್ಜಿ ನಮೂನೆ ಪಡೆದುಕೊಳ್ಳಬಹುದು. ಅಲ್ಲದೇ, ಭರ್ತಿ ಮಾಡಿದ ಅರ್ಜಿಯನ್ನು ಕೃಷಿ ಇಲಾಖೆಯ ಶಿಫಾರಸ್ಸಿನೊಂದಿಗೆ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಮುಂಡರಗಿ ರಸ್ತೆ, ಗದಗ ಕಛೇರಿಗೆ ಆ.31 ರೊಳಗೆ ಸಲ್ಲಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೇಕಾರರ ಸಾಲಮನ್ನಾ: ಮಾಹಿತಿ ಸಲ್ಲಿಕೆಗೆ ಆ.17 ಕಡೆಯ ದಿನ

ಬೆಳಗಾವಿ, ಆ. 12–: ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ನೇಕಾರರ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪಟ್ಟಣ ಸಹಕಾರಿ ಬ್ಯಾಂಕುಗಳು, ಕೃಷಿಯೇತರ ಪತ್ತಿನ ಸಹಕಾರಿ ಸಂಘಗಳು, ವಿವಿಧೋದ್ದೇಶ ಸಹಕಾರಿ ಸಂಘಗಳು, ಕೈಗಾರಿಕಾ ಸಹಕಾರಿ ಬ್ಯಾಂಕುಗಳು, ಇತರೆ ಸಹಕಾರಿ ಬ್ಯಾಂಕುಗಳು, ಸೌಹಾರ್ದ ಸಹಕಾರಿ ಸಂಘ/ ಸೌಹಾರ್ದ ಸಹಕಾರಿ ಬ್ಯಾಂಕ್, ಕೃಷಿ ಪತ್ತಿನ ಸಹಕಾರಿ ಸಂಘಗಳಿಂದ ಪಡೆದು ದಿನಾಂಕ: 01–01–2019 ರಿಂದ 31–03–2019ರ ಅವಧಿಯೊಳಗೆ ಪಾವತಿಸಿದಂತಃ ನೇಕಾರರಿಗೂ ಸಹ ರೂ.1.00 ಲಕ್ಷಗಳ ವರೆಗಿನ (ಅಸಲು ಮತ್ತು ಬಡ್ಡಿ ಸೇರಿ) ಸಾಲಮನ್ನಾ ಯೋಜನೆಯನ್ನು ವಿಸ್ತರಿಸಿ ಅವರುಗಳು ಪಾವತಿ ಮಾಡಿದಂತಹ ಸಾಲದ ಮೊತ್ತವನ್ನು ಮರುಪಾವತಿಸಲು ಆದೇಶ ಹೊರಡಿಸಲಾಗಿದೆ.

ಅದರಂತೆ ಈಗಾಗಲೇ ಯೂಸರ್ ಐ.ಡಿ ಮತ್ತು ಪಾಸ್‌ವರ್ಡ ಹೊಂದಿರುವ ಸಹಕಾರ ಸಂಘ । ಬ್ಯಾಂಕುಗಳು ತಮ್ಮ ಸಾಲಗಾರರ ಮಾಹಿತಿಯನ್ನು ಸಾಲಮನ್ನಾ ವೆಬ್ ಸೈಟ್ ಜುಣ2019.ಞಛಿಛಿಛಿ.ಟ ರಲ್ಲಿ ಭರ್ತಿ ಮಾಡಲು ದಿನಾಂಕ: 17–08–2020 ಕೊನೆಯ ದಿನವಾಗಿರುತ್ತದೆ. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, "ಸಾಮರ್ಥ್ಯ ಸೌಧ" ಅನಗೋಳ ಮುಖ್ಯ ರಸ್ತೆ, ಬೆಳಗಾವಿ ಇವರ ಕಛೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡೆಹರಾಡೂನ್ ರಾಷ್ಟ್ರೀಯ ಇಂಡಿಯನ್ ಮಿಲಟರಿ ಕಾಲೇಜ್: 8ನೇ ತರಗತಿ ಪ್ರವೇಶ ಪರೀಕ್ಷೆಗಾಗಿ ಅರ್ಜಿ ಆಹ್ವಾನ

ಬೆಳಗಾವಿ, ಆ.12– ಜುಲೈ 2021ನೇ ಅಧಿವೇಶನಕ್ಕಾಗಿ ಉತ್ತರಾಖಂಡ ರಾಜ್ಯದ ಡೆಹರಾಡೂನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಟರಿ ಕಾಲೇಜನಲ್ಲಿ 8ನೇ ತರಗತಿಗೆ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ ದಿನಾಂಕ 01 ಡಿಸೆಂಬರ್(ಮಂಗಳವಾರ) ಮತ್ತು 02 ಡಿಸೆಂಬರ್(ಬುಧವಾರ) 2020ರಂದು ನಡೆಸಲಾಗುವುದು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರುವ ಮತ್ತು ದಿನಾಂಕ 01–07–2021ರಂತೆ 11 ಳ ವರ್ಷದಿಂದ 13 ವರ್ಷದೊಳಗಿರುವ (ಅಂದರೆ 02–07–2008 ರಿಂದ 01–01–2009ರೊಳಗೆ ಜನಿಸಿರುವ) ಬಾಲಕರು ಮಾತ್ರ ಸದರಿ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ.

ಈ ಸಂಸ್ಥೆಯ ಮುಖ್ಯ ಗುರಿ ಯುವಕರನ್ನು ದೇಶದ ಸಶಸ್ತ್ರ ಪಡೆಗೆ ಸೇರಲು ಸಿದ್ಧಗೊಳಿಸುವುದು ಹಾಗೂ ಈ ನಿಟ್ಟಿನಲ್ಲಿ ಯುವಕರಿಗೆ ಸರ್ವ ರೀತಿಯ ವಿದ್ಯಾಭ್ಯಾಸ/ತರಬೇತಿ ನೀಡುವುದು. ಕಾಲೇಜಿನಲ್ಲಿ ವರ್ಷವೊಂದಕ್ಕೆ ಪ್ರಸಕ್ತ ವಿದ್ಯಾಭ್ಯಾಸ ಶುಲ್ಕ ರೂ 42.400/– ಆಗಿರುತ್ತದೆ.

ವಿವರಣ ಪತ್ರ ಹಾಗೂ ಹಳೇ ಪ್ರಶ್ನೆ ಪತ್ರಿಕೆಗಳನ್ನೊಳಗೊಂಡ ಅರ್ಜಿ ನಮೂನೆಯನ್ನು ಕೋರಿಕೆ ಪತ್ರ ಮೇರೆಗೆ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ಭವನ, ನಂ 58 ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ರಸ್ತೆ, ಬೆಂಗಳೂರು–560025, ರವರಿಂದ "THE COMMANDANT RIMC DEHRADUN" PAYABLE AT SBI, TEL BHAVAN, DEHRADUN (BANK CODE NO 01576) ಇವರ ಹೆಸರಿನಲ್ಲಿ ರೂ 600/– (ಸಾಮಾನ್ಯ ಅಭ್ಯರ್ಥಿಗಳಿಗೆ) & ರೂ 555/– (ಎಸ್ ಸಿ/ಎಸ್ ಟಿ ಅಭ್ಯರ್ಥಿಗಳಿಗೆ) ಪಡೆದ ಬ್ಯಾಂಕ್ ಡಿಮಾಂಡ ಡ್ರಾಫ್ಟ್ ಕಳುಹಿಸಿ ಖುದ್ದಾಗಿ/ರಿಜಿಸ್ಟರ್ಡ್ ಪೋಸ್ಟ್ ದ್ವಾರ ಪಡೆಯಬಹುದಾಗಿದೆ.

ರಿಜಿಸ್ಟರ್ಡ್ ಪೋಸ್ಟ್ ಮೂಲಕ ಅರ್ಜಿ ನಮೂನೆಗಳನ್ನು ಪಡೆಯಲಿಚ್ಚಿಸಲಿರುವ ಅಭ್ಯರ್ಥಿಗಳು ಸಂಬಂಧಿಸಿದ ಬ್ಯಾಂಕ್ ಡ್ರಾಫ್ಟ್‌ನೊಂದಿಗೆ 11"ಘಿ9" ಅಗಲ ಅಳತೆ ಸೈಜಿನ ಸ್ವವಿಳಾಸದ ಲಕೋಟೆಯ ಮೇಲೆ ರೂ 40/– ಮೌಲ್ಯದ ಅಂಚೆ ಚೀಟಿ ಲಗತ್ತಿಸಿ ಕಳುಹಿಸತಕ್ಕದ್ದು. ಲಕೋಟೆಯ ಮೇಲೆ ಅಭ್ಯರ್ಥಿಯ ಪೂರ್ಣ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.

ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ಅಡಕಗಳೊಂದಿಗೆ ದಿನಾಂಕ 31–03–2020ರೊಳಗಾಗಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ಭವನ, ನಂ 58 ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ರಸ್ತೆ, ಬೆಂಗಳೂರು–560025, ಇವರಿಗೆ, ಕಂಡಿಕೆ (2)ರಲ್ಲಿ ತಿಳಿಸಿರುವ ವಿಳಾಸಕ್ಕೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ದಾಖಲಾತಿಗಳ ವಿವರ:ಮುನ್ಸಿಪಾಲಿಟಿ/ಗ್ರಾಮ ಪಂಚಾಯತ್ ಪ್ರಾಧಿಕಾರ ವತಿಯಿಂದ ಆಂಗ್ಲ ಭಾಷೆಯಲ್ಲಿ ಪಡೆದ ಅಭ್ಯರ್ಥಿಯ ಜನ್ಮ ಪ್ರಮಾಣ ಪತ್ರದ ಧೃಢೀಕೃತ ಪ್ರತಿ, 5 ಪಾಸಪೋರ್ಟ್ ಸೈಜಿನ ಭಾವಚಿತ್ರಗಳು. (ಅರ್ಜಿಗಳಲ್ಲಿ ಅಂಟಿಸಿದ ಭಾವಚಿತ್ರವನ್ನು ಸೇರಿಸಿ) ಎಸ್ ಸಿ/ಎಸ್ ಟಿ ಅಭ್ಯರ್ಥಿಗಳಾಗಿದ್ದಲ್ಲಿ, ಸಕ್ಷಮ ಪ್ರಾಧಿಕಾರದಿಂದ ನೀಡಿದ ಜಾತಿ ಪ್ರಮಾಣ ಪತ್ರದ ಧೃಢೀಕೃತ ಪ್ರತಿ (ಆಂಗ್ಲ ಭಾಷೆಯಲ್ಲಿ ಇರುವಂತೆ ಮಾತ್ರ).

ಪರೀಕ್ಷಾ ಪ್ರವೇಶ ಪತ್ರವನ್ನು ತ್ವರಿತ/ನೊಂದಾಯಿತ ಅಂಚೆದ್ವಾರ ರವಾನಿಸಲು ರೂ 40/–ರ ಅಂಚೆ ಚೀಟಿ ಅಂಟಿಸಿದ ಸ್ವವಿಳಾಸ ಲಕೋಟೆ ಶಾಲಾ ಪ್ರಾಚಾರ್ಯರು/ಮುಖ್ಯೋಪಾಧ್ಯಾಯರಿಂದ ಅಭ್ಯರ್ಥಿ ಜನ್ಮ ದಿನಾಂಕ ಮತ್ತು ಓದುತ್ತಿರುವ ತರಗತಿ ಬಗ್ಗೆ ಪಡೆದ ಪ್ರಮಾಣ ಪತ್ರ ಮೂಲ ಪ್ರತಿ (ಧೃಢೀಕರಿಸಿದ ಅಭ್ಯರ್ಥಿ ಭಾವ ಚಿತ್ರದೊಂದಿಗೆ). ಈ ರಾಜ್ಯದ ವಾಸಸ್ಥಾನ ಧೃಢೀಕರಣ ಪತ (ತಹಸೀಲ್ದಾರರಿಂದ) ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–25589459 ಅಥವಾ ಸಮೀಪದಲ್ಲಿರುವ ಜಂಟಿ/ಉಪ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ ಇವರನ್ನು ಸಂಪರ್ಕಿಸಬೇಕೆಂದು ಬೆಳಗಾವಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.